# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಕರ್ನಾಟಕ ರಾಜ್ಯದಲ್ಲಿನ ವೃತ್ತಿ ಶಿಕ್ಷಣ ಇಲಾಖೆಯ ಅರೆ ಕಾಲಿಕ ಸಿಬ್ಬಂದಿಯನ್ನು ಕೃಷಿ ಇಲಾಖೆಯ ಸಹಾಯಕ ಕೃಷಿ ಅಧಿಕಾರಿ ಮತ್ತು ಪ್ರಥಮ ದರ್ಜೆ ಸಹಾಯಕರ ಹುದ್ದೆಗೆ ವಿಲೀನಗೊಳಿಸುವ ಬಗ್ಗೆ.

**ಓದಲಾಗಿದೆ:-**

1) ಸರ್ಕಾರದ ಅಧಿಸೂಚನೆ ಸಂಖ್ಯೆ:ಸಂವ್ಯಶಾಇ/22/ಶಾಸನ/2011, ಬೆಂಗಳೂರು, ದಿನಾಂಕ:06-04-2011.
2) ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ/93 ಟಿವಿಇ/12, ಬೆಂಗಳೂರು, ದಿನಾಂಕ:27-12-2012.
3) ಕೃಷಿ ಆಯುಕ್ತರು, ಬೆಂಗಳೂರು, ಇವರ ಪತ್ರ ಸಂಖ್ಯೆ:ಕೃಇಸಿ/1/ಸಕೃಅ-2/ವಿಲೀನ/32/2012-13, ದಿನಾಂಕ:28-01-2013.

**ಪ್ರಸ್ತಾವನೆ:-**

ಕರ್ನಾಟಕ ರಾಜ್ಯದಲ್ಲಿನ ಪದವಿ ಪೂರ್ವ ಶಿಕ್ಷಣದಲ್ಲಿರುವ ವೃತ್ತಿ ಆಧಾರಿತ ಕೋರ್ಸುಗಳಲ್ಲಿ ಸರ್ಕಾರಿ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅರೆ ಕಾಲಿಕ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳನ್ನು ರಾಜ್ಯದ ವಿವಿಧ ಇಲಾಖೆಗಳಲ್ಲಿ ನೇರ ನೇಮಕಾತಿ ಕೋಟಾದಡಿ ಖಾಲಿ ಇರುವ ಸಮಾನಾಂತರ ಹುದ್ದೆಗಳಲ್ಲಿ ವಿದ್ಯಾರ್ಹತೆಗೆ ಅನುಗುಣವಾಗಿ ವಿಲೀನಗೊಳಿಸಲು ಮೇಲೆ (1)ರಲ್ಲಿ ಓದಲಾಗಿರುವ ದಿನಾಂಕ:06-04-2011ರ ಅಧಿಸೂಚನೆಯಲ್ಲಿ ಅನುಮೋದನೆಯನ್ನು ನೀಡಲಾಗಿದೆ.

ಕ್ರಮಾಂಕ (2)ರಲ್ಲಿ ಓದಲಾದ ದಿನಾಂಕ:27-12-2012ರ ಸರ್ಕಾರದ ಆದೇಶದಲ್ಲಿ ಶಿಕ್ಷಣ ಇಲಾಖೆಯು ಕರ್ನಾಟಕ ರಾಜ್ಯದಲ್ಲಿನ ಪದವಿ ಪೂರ್ವ ಶಿಕ್ಷಣದಲ್ಲಿರುವ ವೃತ್ತಿ ಆಧಾರಿತ ಕೋರ್ಸುಗಳಲ್ಲಿ ಸರ್ಕಾರದ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ಒಟ್ಟು 996 ಅರೆ ಕಾಲಿಕ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳನ್ನು ಮೊದಲ ಹಂತದಲ್ಲಿ 11 ಇಲಾಖೆಗಳಿಗೆ ಹಂಚಿಕೆ ಮಾಡಿ, ಸದರಿ ಆದೇಶದಲ್ಲಿ ಸೂಚಿಸಲಾಗಿರುವ ಹುದ್ದೆಗಳಲ್ಲಿ ವಿಲೀನಗೊಳಿಸಿ ಆದೇಶಿಸಿರುತ್ತದೆ. ಹೀಗೆ ವಿಲೀನಗೊಳಿಸಿದ 11 ಇಲಾಖೆಗಳ ಪೈಕಿ ಕೃಷಿ ಇಲಾಖೆಯು ಸಹ ಇದ್ದು, ಈ ಇಲಾಖೆಗೆ ಬಿ.ಎಸ್ಸಿ, ಅಗ್ರಿ ಮತ್ತು ಅಗ್ರಿ ಮಾರ್ಕೆಟಿಂಗ್ ಅಂಡ್ ಕೋ-ಅಪರೇಷನ್ ಪದವಿ ಪಡೆದ ಒಟ್ಟು 25 ಅರೆ ಕಾಲಿಕ ಸಿಬ್ಬಂದಿಯನ್ನು ಸಹಾಯಕ ಕೃಷಿ ಅಧಿಕಾರಿ, ಮತ್ತು ಪ್ರಥಮ ದರ್ಜೆ ಸಹಾಯಕ ಹುದ್ದೆಗಳಲ್ಲಿ ಈ ಕೆಳಕಂಡ ಷರತ್ತುಗಳಿಗೊಳಪಡಿಸಿ ವಿಲೀನಗೊಳಿಸಲು ಆದೇಶಿಸಿರುತ್ತದೆ.

1. ಸರ್ಕಾರಿ ಇಲಾಖೆಗಳಲ್ಲಿ ಖಾಲಿ ಇರುವ ನೇರ ನೇಮಕಾತಿ ಹುದ್ದೆಗಳಲ್ಲಿ ವಿದ್ಯಾರ್ಹತೆಗನುಸಾರವಾಗಿ ಸಮಾನಾಂತರ ಹುದ್ದೆಗಳಲ್ಲಿ ಅಥವಾ ಅಂತಹ ಹುದ್ದೆ ಖಾಲಿ ಇಲ್ಲದಿದ್ದ ಪಕ್ಷದಲ್ಲಿ ಅಥವಾ ವೃಂದ ನೇಮಕಾತಿ ನಿಯಮಗಳ ಷರತ್ತಿಗೆ ಒಳಪಡದವರನ್ನು ಅವರು ಯಾವುದೇ ಹೆಚ್ಚಿನ ವಿದ್ಯಾರ್ಹತೆ ಹೊಂದಿದ್ದರೂ ಸಹ ಸಂಬಂಧಿತ ಇಲಾಖೆಗಳಲ್ಲಿ

ಪ್ರಥಮ ದರ್ಜೆ ಸಹಾಯಕರು ಅಥವಾ ದ್ವಿತೀಯ ದರ್ಜೆ ಸಹಾಯಕರ ಹುದ್ದೆಯಲ್ಲಿ ವಿಲೀನಗೊಳಿಸುವುದು.

2. ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಇತರ ಕಾನೂನಿನಲ್ಲಿ ಅಥವಾ ಕರ್ನಾಟಕ ರಾಜ್ಯ ಸಿವಿಲ್ ಸೇವಾ ಅಧಿನಿಯಮ 1978ರ (1990ರ ಕರ್ನಾಟಕ ಅಧಿನಿಯಮ 14) ಅಡಿಯಲ್ಲಿ ರಚಿಸಿದ ಅಥವಾ ರಚಿಸಲಾಗಿದೆ ಎಂದು ಭಾವಿಸಲಾದ ಸೇವಾ ಷರತ್ತುಗಳನ್ನು ನಿಯಂತ್ರಿಸುವ ಯಾವುದೇ ಇತರ ನಿಯಮಗಳಲ್ಲಿ ಏನೇ ಒಳಗೊಂಡಿದ್ದರೂ, ವಿಲೀನಗೊಂಡ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರನು ಕರ್ತವ್ಯಕ್ಕೆ ಹಾಜರಾದ ನಂತರ ಈ ಅಧಿನಿಯಮದ ಅಡಿಯಲ್ಲಿ ಆತನ ಪ್ರಾರಂಭಿಕ ಮೂಲ ವೇತನವನ್ನು ಆತನು ವಿಲೀನಗೊಂಡ ಹುದ್ದೆಯ ಪ್ರವರ್ಗದ ಕಾಲಿಕ ವೇತನ ಶ್ರೇಣಿಯ ಕನಿಷ್ಠಕ್ಕೆ ನಿಗಧಿಗೊಳಿಸತಕ್ಕದ್ದು, ಹಾಗೂ ತನ್ನ ವಿಲೀನಕ್ಕೆ ಮೊದಲು ಸಲ್ಲಿಸಿದ ಸೇವೆಯನ್ನು ವೇತನ ಜೇಷ್ಠತೆ ಹಾಗೂ ರಜೆ ಅಥವಾ ಪಿಂಚಣಿಗೆ ಸಂಬಂಧಿಸಿದಂತೆ ಲೆಕ್ಕಕ್ಕೆ ತೆಗೆದುಕೊಳ್ಳತಕ್ಕದ್ದಲ್ಲ.

3. ಮೇಲೆ(1)ರಲ್ಲಿ ಒದಲಾದ ಅಧಿನಿಯಮದ ಅಡಿಯಲ್ಲಿ ವಿಲೀನಗೊಂಡ ವ್ಯಕ್ತಿಗಳ ಪರಸ್ಪರ ಜೇಷ್ಠತೆಯನ್ನು ಐದು ವರ್ಷಗಳು ಪೂರ್ಣಗೊಂಡ ದಿನಾಂಕದಿಂದ ಸದರಿ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರರ ಸೇವಾವಧಿಗೆ ಅನುಸಾರವಾಗಿ ನಿರ್ಧರಿಸತಕ್ಕದ್ದು ಮತ್ತು ಇಬ್ಬರು ಅಥವಾ ಹೆಚ್ಚು ವ್ಯಕ್ತಿಗಳ ಸೇವಾವಧಿಯು ಒಂದೇ ಆಗಿದ್ದಲ್ಲಿ, ವಯಸ್ಸು, ಹೆಚ್ಚಾದ ವ್ಯಕ್ತಿಯನ್ನು ವಯಸ್ಸಿನಲ್ಲಿ ಕಿರಿಯನಾದಂಥ ವ್ಯಕ್ತಿಗಿಂತ ಹಿರಿಯನೆಂಬಂತೆ ಪರಿಗಣಿಸತಕ್ಕದ್ದು.

4. ವಿಲೀನಗೊಳ್ಳುತ್ತಿರುವ ಸಿಬ್ಬಂದಿಯ ಸೇವಾ ವಿವರ, ಜೇಷ್ಠತೆ, ಜಾತಿ, ವಿದ್ಯಾರ್ಹತೆ ಮುಂತಾದವುಗಳಿಗೆ ಸಂಬಂಧಪಟ್ಟ ವಿವರಗಳನ್ನು ದಾಖಲೆಗಳ ಪರಿಶೀಲನೆಯಿಂದ ಸಮಿತಿಯು ದೃಢೀಕರಿಸಿ ಅರ್ಹತೆಯನ್ನು ನಿಗಧಿಪಡಿಸಲಾಗಿದೆ. ವಿಲೀನಗೊಳ್ಳುತ್ತಿರುವ ಸಿಬ್ಬಂದಿ ಕರ್ನಾಟಕ ಸಿವಿಲ್ ಸೇವಾ ನಿಯಮಗಳು, ಕರ್ನಾಟಕ ಸಿವಿಲ್ ಸೇವಾ (ನಡತೆ) ನಿಯಮಗಳು, 1966 ಮತ್ತು ಕರ್ನಾಟಕ ರಾಜ್ಯ ಸಿವಿಲ್ ಸೇವಾ ಅಧಿನಿಯಮ 1978ರ (1990 ಕರ್ನಾಟಕ ಅಧಿನಿಯಮ 14) ಅಡಿಯಲ್ಲಿ ರಚಿಸಿದ ಅಥವಾ ರಚಿಸಲಾಗಿದೆಯೆಂದು ಭಾವಿಸಿದ ಸರ್ಕಾರಿ ನೌಕರರ ಸೇವಾ ಷರತ್ತುಗಳನ್ನು ನಿಯಂತ್ರಿಸುವ ಎಲ್ಲಾ ಇತರೇ ನಿಯಮಗಳಿಗೆ ಒಳಪಟ್ಟಿರುತ್ತಾರೆ.

5. ಕರ್ನಾಟಕ ಸಿವಿಲ್ ಸೇವಾ ನಿಯಮಗಳು, ಕರ್ನಾಟಕ ಸಿವಿಲ್ ಸೇವಾ(ನಡತೆ) ನಿಯಮಗಳು 1966 ಮತ್ತು ಕರ್ನಾಟಕ ರಾಜ್ಯ ಸೇವಾ ಸಿವಿಲ್ ಸೇವಾ ಅಧಿನಿಯಮ 1978ರ (1990ರ ಕರ್ನಾಟಕ ಅಧಿನಿಯಮ 14)ಅಡಿಯಲ್ಲಿ ರಚಿಸಿದ ಅಥವಾ ರಚಿಸಲಾಗಿದೆಯೆಂದು ಭಾವಿಸಿದ ಸರ್ಕಾರಿ ನೌಕರರ ಸೇವಾ ಷರತ್ತುಗಳನ್ನು ವಿನಿಯಮಿಸುವ ಎಲ್ಲಾ ಇತರ ನಿಯಮಗಳು, ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಾಗದಿರುವಷ್ಟರ ಮಟ್ಟಿಗೆ ಈ ಅಧಿನಿಯಮದ ಅಡಿಯಲ್ಲಿ ಸರ್ಕಾರದಲ್ಲಿ ವಿಲೀನಗೊಂಡ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರರಿಗೆ ಅನ್ವಯವಾಗತಕ್ಕದ್ದು.

ಪ್ರಥಮ ದರ್ಜೆ ಸಹಾಯಕರು ಅಥವಾ ದ್ವಿತೀಯ ದರ್ಜೆ ಸಹಾಯಕರ ಹುದ್ದೆಯಲ್ಲಿ ವಿಲೀನಗೊಳಿಸುವುದು.

2. ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಇತರ ಕಾನೂನಿನಲ್ಲಿ ಅಥವಾ ಕರ್ನಾಟಕ ರಾಜ್ಯ ಸಿವಿಲ್ ಸೇವಾ ಅಧಿನಿಯಮ 1978ರ (1990ರ ಕರ್ನಾಟಕ ಅಧಿನಿಯಮ 14) ಅಡಿಯಲ್ಲಿ ರಚಿಸಿದ ಅಥವಾ ರಚಿಸಲಾಗಿದೆ ಎಂದು ಭಾವಿಸಲಾದ ಸೇವಾ ಷರತ್ತುಗಳನ್ನು ನಿಯಂತ್ರಿಸುವ ಯಾವುದೇ ಇತರ ನಿಯಮಗಳಲ್ಲಿ ಏನೇ ಒಳಗೊಂಡಿದ್ದರೂ, ವಿಲೀನಗೊಂಡ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರನು ಕರ್ತವ್ಯಕ್ಕೆ ಹಾಜರಾದ ನಂತರ ಈ ಅಧಿನಿಯಮದ ಅಡಿಯಲ್ಲಿ ಆತನ ಪ್ರಾರಂಭಿಕ ಮೂಲ ವೇತನವನ್ನು ಆತನು ವಿಲೀನಗೊಂಡ ಹುದ್ದೆಯ ಪ್ರವರ್ಗದ ಕಾಲಿಕ ವೇತನ ಶ್ರೇಣಿಯ ಕನಿಷ್ಠಕ್ಕೆ ನಿಗಧಿಗೊಳಿಸತಕ್ಕದ್ದು, ಹಾಗೂ ತನ್ನ ವಿಲೀನಕ್ಕೆ ಮೊದಲು ಸಲ್ಲಿಸಿದ ಸೇವೆಯನ್ನು ವೇತನ ಜೇಷ್ಠತೆ ಹಾಗೂ ರಜೆ ಅಥವಾ ಪಿಂಚಣಿಗೆ ಸಂಬಂಧಿಸಿದಂತೆ ಲೆಕ್ಕಕ್ಕೆ ತೆಗೆದುಕೊಳ್ಳತಕ್ಕದ್ದಲ್ಲ.

3. ಮೇಲೆ(1)ರಲ್ಲಿ ಒದಲಾದ ಅಧಿನಿಯಮದ ಅಡಿಯಲ್ಲಿ ವಿಲೀನಗೊಂಡ ವ್ಯಕ್ತಿಗಳ ಪರಸ್ಪರ ಜೇಷ್ಠತೆಯನ್ನು ಐದು ವರ್ಷಗಳು ಪೂರ್ಣಗೊಂಡ ದಿನಾಂಕದಿಂದ ಸದರಿ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರರ ಸೇವಾವಧಿಗೆ ಅನುಸಾರವಾಗಿ ನಿರ್ಧರಿಸತಕ್ಕದ್ದು ಮತ್ತು ಇಬ್ಬರು ಅಥವಾ ಹೆಚ್ಚು ವ್ಯಕ್ತಿಗಳ ಸೇವಾವಧಿಯು ಒಂದೇ ಆಗಿದ್ದಲ್ಲಿ, ವಯಸ್ಸು, ಹೆಚ್ಚಾದ ವ್ಯಕ್ತಿಯನ್ನು ವಯಸ್ಸಿನಲ್ಲಿ ಕಿರಿಯನಾದಂಥ ವ್ಯಕ್ತಿಗಿಂತ ಹಿರಿಯನೆಂಬಂತೆ ಪರಿಗಣಿಸತಕ್ಕದ್ದು.

4. ವಿಲೀನಗೊಳ್ಳುತ್ತಿರುವ ಸಿಬ್ಬಂದಿಯ ಸೇವಾ ವಿವರ, ಜೇಷ್ಠತೆ, ಜಾತಿ, ವಿದ್ಯಾರ್ಹತೆ ಮುಂತಾದವುಗಳಿಗೆ ಸಂಬಂಧಪಟ್ಟ ವಿವರಗಳನ್ನು ದಾಖಲೆಗಳ ಪರಿಶೀಲನೆಯಿಂದ ಸಮಿತಿಯು ದೃಢೀಕರಿಸಿ ಅರ್ಹತೆಯನ್ನು ನಿಗಧಿಪಡಿಸಲಾಗಿದೆ. ವಿಲೀನಗೊಳ್ಳುತ್ತಿರುವ ಸಿಬ್ಬಂದಿ ಕರ್ನಾಟಕ ಸಿವಿಲ್ ಸೇವಾ ನಿಯಮಗಳು, ಕರ್ನಾಟಕ ಸಿವಿಲ್ ಸೇವಾ (ನಡತೆ) ನಿಯಮಗಳು, 1966 ಮತ್ತು ಕರ್ನಾಟಕ ರಾಜ್ಯ ಸಿವಿಲ್ ಸೇವಾ ಅಧಿನಿಯಮ 1978ರ (1990 ಕರ್ನಾಟಕ ಅಧಿನಿಯಮ 14) ಅಡಿಯಲ್ಲಿ ರಚಿಸಿದ ಅಥವಾ ರಚಿಸಲಾಗಿದೆಯೆಂದು ಭಾವಿಸಿದ ಸರ್ಕಾರಿ ನೌಕರರ ಸೇವಾ ಷರತ್ತುಗಳನ್ನು ನಿಯಂತ್ರಿಸುವ ಎಲ್ಲಾ ಇತರೇ ನಿಯಮಗಳಿಗೆ ಒಳಪಟ್ಟಿರುತ್ತಾರೆ.

5. ಕರ್ನಾಟಕ ಸಿವಿಲ್ ಸೇವಾ ನಿಯಮಗಳು, ಕರ್ನಾಟಕ ಸಿವಿಲ್ ಸೇವಾ(ನಡತೆ) ನಿಯಮಗಳು 1966 ಮತ್ತು ಕರ್ನಾಟಕ ರಾಜ್ಯ ಸೇವಾ ಸಿವಿಲ್ ಸೇವಾ ಅಧಿನಿಯಮ 1978ರ (1990ರ ಕರ್ನಾಟಕ ಅಧಿನಿಯಮ 14)ಅಡಿಯಲ್ಲಿ ರಚಿಸಿದ ಅಥವಾ ರಚಿಸಲಾಗಿದೆಯೆಂದು ಭಾವಿಸಿದ ಸರ್ಕಾರಿ ನೌಕರರ ಸೇವಾ ಷರತ್ತುಗಳನ್ನು ವಿನಿಯಮಿಸುವ ಎಲ್ಲಾ ಇತರ ನಿಯಮಗಳು, ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಾಗದಿರುವಷ್ಟರ ಮಟ್ಟಿಗೆ ಈ ಅಧಿನಿಯಮದ ಅಡಿಯಲ್ಲಿ ಸರ್ಕಾರದಲ್ಲಿ ವಿಲೀನಗೊಂಡ ಅರೆಕಾಲಿಕ ವೃತ್ತಿ ಆಧಾರಿತ ಕೋರ್ಸುಗಳ ನೌಕರರಿಗೆ ಅನ್ವಯವಾಗತಕ್ಕದ್ದು.

ಮೇಲೆ ಕ್ರಮಾಂಕ(3)ರಲ್ಲಿ ಓದಲಾದ ದಿನಾಂಕ:28-01-2013ರ ಪತ್ರದಲ್ಲಿ ಕೃಷಿ ಆಯುಕ್ತರು, ಸರ್ಕಾರಕ್ಕೆ ಪ್ರಸ್ತಾವನೆಯನ್ನು ಕಳುಹಿಸಿ ಕೃಷಿ ಇಲಾಖೆಗೆ ಹಂಚಿಕೆಯಾಗಿರುವ 25 ಅರೆ ಕಾಲಿಕ ಸಿಬ್ಬಂದಿಗಳ ಪೈಕಿ ಶ್ರೀ ಸಿ.ಕೆ.ಪುಟ್ಟರಾಜು, ಇವರು ವಯೋಮಾನ ಮೀರಿರುವುದರಿಂದ ಇವರನ್ನು ಹೊರತುಪಡಿಸಿ, ಉಳಿದ 23 ಬಿ.ಎಸ್ಸಿ, ಅಗ್ರಿ ಪದವಿ ಪಡೆದ ಅರೆ ಕಾಲಿಕ ಅಭ್ಯರ್ಥಿಗಳನ್ನು ಸಹಾಯಕ ಕೃಷಿ ಅಧಿಕಾರಿ ಹುದ್ದೆಗೆ ಹಾಗೂ ಮತ್ತೊಬ್ಬ ಬಿ.ಎಸ್ಸಿ. ಅಗ್ರಿ ಮಾರ್ಕೆಟಿಂಗ್ ಅಂಡ್ ಕೋ-ಅಪರೇಷನ್ ಪದವಿ ಪಡೆದ ಅಭ್ಯರ್ಥಿಯನ್ನು ಪ್ರಥಮ ದರ್ಜೆ ಸಹಾಯಕರ ಹುದ್ದೆಯಲ್ಲಿ ವಿಲೀನಗೊಳಿಸಿಕೊಳ್ಳಲು ಆದೇಶ ನೀಡುವಂತೆ ಕೋರಿರುತ್ತಾರೆ.

ಕೃಷಿ ಆಯುಕ್ತರ ಮೇಲ್ಕಂಡ ಪ್ರಸ್ತಾವನೆಯಂತೆ ಪರಿಶೀಲಿಸಿ, ವೃತ್ತಿ ಶಿಕ್ಷಣ ಇಲಾಖೆಯಲ್ಲಿನ ಅರೆ ಕಾಲಿಕ ಸಿಬ್ಬಂದಿಯನ್ನು ಕೃಷಿ ಇಲಾಖೆಯಲ್ಲಿ ನೇರ ನೇಮಕಾತಿ ಕೋಟಾದಡಿ ಖಾಲಿ ಇರುವ ಸಹಾಯಕ ಕೃಷಿ ಅಧಿಕಾರಿ ಮತ್ತು ಪ್ರಥಮ ದರ್ಜೆ ಸಹಾಯಕರ ಹುದ್ದೆಗಳಲ್ಲಿ ವಿಲೀನಗೊಳಿಸಲು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಕೃಇ 57 ಕೃಪಸೇ 2012, ಬೆಂಗಳೂರು, ದಿನಾಂಕ:16-02-2013.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಕ್ರಮಾಂಕ(1) ಮತ್ತು (2)ರಲ್ಲಿ ಓದಲಾಗಿರುವ ಅಧಿಸೂಚನೆಗಳನ್ವಯ ಕೃಷಿ ಇಲಾಖೆಗೆ ಹಂಚಿಕೆಯಾಗಿರುವ ವೃತ್ತಿ ಶಿಕ್ಷಣ ಇಲಾಖೆಯಲ್ಲಿನ 25 ಅರೆ ಕಾಲಿಕ ಸಿಬ್ಬಂದಿಗಳಲ್ಲಿ ವಯೋಮಾನ ಮೀರಿರುವ ಶ್ರೀ ಸಿ.ಕೆ. ಪುಟ್ಟರಾಜು, ಇವರನ್ನು ಹೊರತುಪಡಿಸಿ ಬಿ.ಎಸ್ಸಿ. ಅಗ್ರಿ ಪದವಿ ಪಡೆದ ಅನುಬಂಧ-1ರಲ್ಲಿ ಕಾಣಿಸಿರುವ 23 ಅರೆ ಕಾಲಿಕ ಸಿಬ್ಬಂದಿಗಳಿಗೆ ರೂ.21600-40050ರ ವೇತನ ಶ್ರೇಣಿಯಲ್ಲಿ ಸಹಾಯಕ ಕೃಷಿ ಅಧಿಕಾರಿ ಹುದ್ದೆಗಳಿಗೆ ಮತ್ತು ಅನುಬಂಧ-2ರಲ್ಲಿ ಕಾಣಿಸಿರುವ ಬಿ.ಎಸ್ಸಿ. ಅಗ್ರಿ ಮಾರ್ಕೆಟಿಂಗ್ ಅಂಡ್ ಕೋ-ಅಪರೇಷನ್ ಪದವಿ ಪಡೆದ ಒಬ್ಬ ಅರೆ ಕಾಲಿಕ ಸಿಬ್ಬಂದಿಗೆ ರೂ.14550-26700ರ ವೇತನ ಶ್ರೇಣಿಯಲ್ಲಿ ಪ್ರಥಮ ದರ್ಜೆ ಸಹಾಯಕರ ಹುದ್ದೆಯಲ್ಲಿ ಪ್ರಸ್ತಾವನೆಯಲ್ಲಿ ವಿವರಿಸಿರುವ ಷರತ್ತುಗಳನ್ನು ಒಳಗೊಂಡಂತೆ ಈ ಕೆಳಗಿನ ಷರತ್ತುಗಳಿಗೊಳಪಟ್ಟು ಈ ಕೂಡಲೇ ಜಾರಿಗೆ ಬರುವಂತೆ ವಿಲೀನಗೊಳಿಸಿ, ಆದೇಶಿಸಿದೆ.

1. ಅರೆ ಕಾಲಿಕ ಬೋಧಕ ಸಿಬ್ಬಂದಿಯ ನೇಮಕಾತಿಯು, ಅವರ ನೇಮಕಾತಿ ಹಾಗೂ ಸೇವಾ ಷರತ್ತುಗಳು ಆಗಿಂದಾಗ್ಗೆ ಜಾರಿಯಲ್ಲಿರುವ ಸರ್ಕಾರಿ ಆದೇಶಗಳು/ಕಾಲಕಾಲಕ್ಕೆ ಹೊರಡಿಸಲ್ಪಡುವ ನಿಯಮಾವಳಿಗಳಿಗೆ ಒಳಪಟ್ಟಿರುತ್ತದೆ. ಹಾಗೂ ಸರ್ಕಾರದ ಆದೇಶ ಸಂಖ್ಯೆ:ಎಫ್‌ಡಿ(ಎಸ್ ಪಿಎಲ್) 04 ಪಿಇಟಿ 2005, ದಿನಾಂಕ:31-03-2006ರ ಅನ್ವಯ ನಿಗಧಿತ ವಂತಿಕೆ ಪಿಂಚಣಿ ಯೋಜನೆಗೆ ಒಳಪಟ್ಟಿರುತ್ತದೆ.
2. ವಿಲೀನಗೊಂಡ ಅರೆಕಾಲಿಕ ಸಿಬ್ಬಂದಿಗಳು ಸ್ಥಳ ನಿಯುಕ್ತಿಗೊಳಿಸುವ ಹುದ್ದೆಯಲ್ಲಿ ಹಾಜರಾದ ದಿನಾಂಕದಿಂದ 2 ವರ್ಷಗಳ ಅವಧಿಗೆ ಕರ್ನಾಟಕ ಸಿವಿಲ್ ಸೇವೆಗಳು (Probation) ನಿಯಮಗಳು -1977 ನಿಯಮ-3ರ ಅನ್ವಯ ಖಾಯಂ ಪೂರ್ವ ಅವಧಿಯನ್ನು ತೃಪ್ತಿಕರವಾಗಿ ಪೂರೈಸಬೇಕಾಗಿರುತ್ತದೆ.
3. ವಿಲೀನಗೊಂಡ ಅರೆಕಾಲಿಕ ಸಿಬ್ಬಂದಿಗಳು/ನೇಮಕಾತಿಗೊಂಡ ಅಭ್ಯರ್ಥಿಗಳು ಪರೀಕ್ಷಾರ್ಥ ಅವಧಿಯಲ್ಲಿ (Probationary Period) ಕರ್ನಾಟಕ ನಾಗರೀಕ ಸೇವಾ (ಸೇವಾ ಮತ್ತು ಕನ್ನಡ ಭಾಷಾ ಪರೀಕ್ಷೆ) ನಿಯಮಾವಳಿ 1974ರನ್ವಯ ಸಹಾಯಕ ಕೃಷಿ

ಅಧಿಕಾರಿ ಹುದ್ದೆಗೆ ನಿಗಧಿಪಡಿಸಿರುವ ಇಲಾಖಾ ಪರೀಕ್ಷೆಗಳು ಹಾಗೂ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗತಕ್ಕದ್ದು.

4. ವಿಲೀನಗೊಂಡ ನೌಕರರು ಕೃಷಿ ಆಯುಕ್ತರಿಂದ ಮುಂದಿನ ನೇಮಕಾತಿ ಆದೇಶವನ್ನು ಪಡೆದ 15 ದಿನಗಳೊಳಗಾಗಿ ನೇಮಕಗೊಂಡ ಸ್ಥಳದಲ್ಲಿ ಕರ್ತವ್ಯಕ್ಕೆ ಹಾಜರಾಗತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ.

ಇವರಿಗೆ:

**ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು, ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಹಾಗೂ ಅದರ 100 ಪ್ರತಿಗಳನ್ನು ಒದಗಿಸಲು ಕೋರಿದೆ.**

ಪ್ರತಿಗಳು.

1. ಮಹಾಲೇಖಪಾಲರು, ಮಹಾಲೇಖಪಾಲರ ಕಛೇರಿ, (ಲೆಕ್ಕ ಪತ್ರ ಮತ್ತು ಲೆಕ್ಕ ತಪಾಸಣೆ) ಹೊಸಕಟ್ಟಡ, ಬೆಂಗಳೂರು-1.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು,
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಉನ್ನತ/ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ, ಬೆಂಗಳೂರು,
4. ಸರ್ಕಾರದ ಕಾರ್ಯದರ್ಶಿ, ಕಾನೂನು, ನ್ಯಾಯ ಹಾಗೂ ಮಾನವ ಹಕ್ಕುಗಳ ಇಲಾಖೆ, ಬೆಂಗಳೂರು,
5. ಸರ್ಕಾರದ ಕಾರ್ಯದರ್ಶಿ, ಸಂಸದೀಯ ವ್ಯವಹಾರಗಳ ಮತ್ತು ಶಾಸನ ರಚನಾ ಇಲಾಖೆ, ಬೆಂಗಳೂರು,
6. ಸರ್ಕಾರದ ಕಾರ್ಯದರ್ಶಿ(ಸೇ) ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ಬೆಂಗಳೂರು,
7. ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
8. ಆಯುಕ್ತರು ಜಲಾನಯನ ಅಭಿವೃದ್ಧಿ ಇಲಾಖೆ, ಕಾವೇರಿ ಭವನ, ಬೆಂಗಳೂರು.
9. ಸಂಬಂಧಪಟ್ಟ ಜಂಟಿ ಕೃಷಿ ನಿರ್ದೇಶಕರುಗಳಿಗೆ, (ಆಯುಕ್ತರ ಮುಖಾಂತರ)
10. ಸಂಬಂಧಪಟ್ಟ ಸಹಾಯಕ ಕೃಷಿ ನಿರ್ದೇಶಕರುಗಳಿಗೆ, (ಆಯುಕ್ತರ ಮುಖಾಂತರ
11. ಸಂಬಂಧಪಟ್ಟ ಅಧಿಕಾರಿಗಳಿಗೆ, (ಆಯುಕ್ತರ ಮುಖಾಂತರ
12. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ, ವಿಕಾಸ ಸೌಧ, ಬೆಂಗಳೂರು.
13. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕೃಷಿ ಇಲಾಖೆ, ಇವರ ಆಪ್ತ ಕಾರ್ಯದರ್ಶಿ.
14. ಸರ್ಕಾರದ ಉಪ ಕಾರ್ಯದರ್ಶಿ, ಕೃಷಿ ಇಲಾಖೆ, ಇವರ ಆಪ್ತ ಸಹಾಯಕರು.
15. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.